**1 ನೇ ಹೆಚ್ಚುವರಿ ಸತ್ರ ಮತ್ತು ವಿಶೇಷ ನ್ಯಾಯಾಲಯ, ಚಿಕ್ಕಮಗಳೂರು**

ಸ್ಪೆಷಲ್ ಮೊಕದ್ದಮೆ ನಂಃ 153/2019

| | | |
|---|---|---|
| ಸಾಕ್ಷಿದಾರರ ಹೆಸರು | - ಶಿವಕುಮಾರ | ಪಿಡಬ್ಲ್ಯೂ- 02 |
| ತಂದೆಯ ಹೆಸರು | - ಕೆಂಪೇಗೌಡ | ಸಿಡಬ್ಲ್ಯೂ -08 |
| ವಯಸ್ಸು | - 44 ವರ್ಷ | |
| ಉದ್ಯೋಗ | - ವ್ಯಾಪಾರ | |
| ವಾಸ ಸ್ಥಳ | - ಸಖರಾಯಪಟ್ಟಣ | |

ದಿನಾಂಕಃ 06-01-2026 ರಂದು ಸಾಕ್ಷಿಗೆ ಪ್ರಮಾಣ ವಚನವನ್ನು ಬೋಧಿಸಲಾಯಿತು.

ಮುಖ್ಯ ವಿಚಾರಣೆ : ವಿಶೇಷ ಸರ್ಕಾರಿ ಅಭಿಯೋಜಕರಿಂದ-

**1.** ನ್ಯಾಯಾಲಯದಲ್ಲಿ ಹಾಜರಿರುವ 2 ಮತ್ತು 3 ನೇ ಆರೋಪಿತರು ಯಾರೆಂದು ನನಗೆ ಗೊತ್ತಿಲ್ಲ. ಈ ಪ್ರಕರಣದ ಯಾವುದೇ ಸಾಕ್ಷಿದಾರರು ನನಗೆ ಗೊತ್ತಿಲ್ಲ.

**2.** ಈ ಪ್ರಕರಣದ ಬಗ್ಗೆ ನನಗೆ ಯಾವುದೇ ಮಾಹಿತಿ ಇಲ್ಲ. ಪೊಲೀಸರು ನನ್ನನ್ನು ವಿಚಾರಿಸಿಲ್ಲ ಮತ್ತು ನಾನು ಅವರಿಗೆ ಯಾವುದೇ ಹೇಳಿಕೆಯನ್ನು ನೀಡಿಲ್ಲ.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಪಾಟೀ ಸವಾಲು ಮಾಡಲು ಅಭಿಯೋಜಕರು ಅನುಮತಿ ಕೇಳಿರುತ್ತಾರೆ ದಾಖಲೆಗಳನ್ನು ಪರಿಶೀಲಿಸಿ ಅನುಮತಿ ನೀಡಲಾಯಿತು)

ಪಾಟೀ ಸವಾಲುಃ ವಿಶೇಷ ಸರ್ಕಾರಿ ಅಭಿಯೋಜಕರಿಂದಃ-

3. ನಾನು ಪಾವನ ವೈನ್ ಶಾಪ್ ಬಳಿ ಕ್ಯಾಂಟೀನ್ ಇಟ್ಟುಕೊಂಡು

ವ್ಯಾಪಾರ ಮಾಡಿಕೊಂಡಿದ್ದೇನೆ ಎಂದರೆ ಸರಿ.

4. ದಿಃ 22-07-2019 ರಂದು ಮಧ್ಯಾಹ್ನ 2.45 ಗಂಟೆಗೆ ಚಾಸಾ.1 ಮತ್ತು 2 ನೇ ಆರೋಪಿ ಸದರಿ ವೈನ್ ಶಾಪ್ ಬಳಿ ಹೋಗುವುದನ್ನು ನೋಡಿದ್ದೆನು ಎಂದರೆ ಸರಿಯಲ್ಲ. ಮಧ್ಯಾಹ್ನ 3 ಗಂಟೆ ಸಮಯಕ್ಕೆ ಸದರಿ ಶಾಪ್ ನ ಪಕ್ಕದ ರಸ್ತೆಯಲ್ಲಿ ಗಲಾಟೆಯಾಗುವ ಶಬ್ಧ ಕೇಳಿ ನಾನು ಅಲ್ಲಿಗೆ ಹೋಗಿ ನೋಡಿದಾಗ ಅಲ್ಲಿ 1 ನೇ ಆರೋಪಿ ಕೃಷ್ಣ ಚಾಸಾ.1 ರವರಿಗೆ ಕತ್ತಿಯಿಂದ ಅವರ ತಲೆಯ ಹಿಂಭಾಗ, ಎಡಭುಜ, ಹೊಟ್ಟೆ 2 ಕಾಲಿನ ತೊಡೆಯ ಬಳಿ ಕಡಿಯುತ್ತಿದ್ದನು ಎಂದರೆ ಸರಿಯಲ್ಲ. 1 ನೇ ಆರೋಪಿಯ ಪಕ್ಕದಲ್ಲಿ ನಿಂತಿದ್ದ 2 ನೇ ಆರೋಪಿ ಬಿಡಬೇಡ ಕಡಿದು ಸಾಯಿಸು ಎಂದು ಹೇಳುತ್ತಿದ್ದನು ಎಂದರೆ ಸರಿಯಲ್ಲ. ಗಲಾಟೆಯ ಶಬ್ಧ ಕೇಳಿ ಪ್ರಾಸಾ.1 ರವರು ಅಲ್ಲಿಗೆ ಓಡಿ ಬಂದರು ಎಂದರೆ ಸರಿಯಲ್ಲ.

5. ನಾವು ಜಗಳವನ್ನು ಬಿಡಿಸಲು ಹೋದಾಗ 1 ನೇ ಆರೋಪಿ ತನ್ನ ಕೈಯಲ್ಲಿದ್ದ ಕತ್ತಿಯನ್ನು ಕೆಳಗೆ ಬಿಸಾಡಿ 1 ಮತ್ತು 2 ನೇ ಆರೋಪಿತರು ಸೇರಿ ಮರಣಾಂತಿಕವಾಗಿ ಗಾಯಗೊಳಿಸಿದ್ದ ಚಾಸಾ.1 ರವರನ್ನು ಕುರಿತು, ಇವತ್ತು ಬದುಕಿ ಬಿಟ್ಟೆ ಇನ್ನೊಂದು ದಿನ ಸಿಕ್ಕು ನಿನ್ನನ್ನು ಕೊಲೆ ಮಾಡದೇ ಬಿಡುವುದಿಲ್ಲ ಎಂದು ಹೇಳಿ ಹೋದರು ಎಂದರೆ ಸರಿಯಲ್ಲ. ಸ್ವಲ್ಪ ಸಮಯಕ್ಕೆ ಚಾಸಾ.9 ಮತ್ತು 10 ರವರು ಅಲ್ಲಿಗೆ ಬಂದರು ಎಂದರೆ ಸರಿಯಲ್ಲ. ಗಾಯಗೊಂಡಿದ್ದ ಚಾಸಾ.1 ರವರನ್ನು ಸಖರಾಯಪಟ್ಟಣ ಆಸ್ಪತ್ರೆಗೆ ತೋರಿಸಿ ಅಲ್ಲಿನ ವೈದ್ಯರ ಸಲಹೆಯಂತೆ ಚಿಕ್ಕಮಗಳೂರು

ಜಿಲ್ಲಾ ಆಸ್ಪತ್ರೆಗೆ ಕರೆದುಕೊಂಡು ಹೋಗಿ ದಾಖಲು ಮಾಡಿದರು ಎಂದರೆ ಸರಿಯಲ್ಲ. ಚಾಸಾ.1 ರವರು ಸದರಿ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದಾಗ ಆರೋಪಿತರ ವಿರುದ್ಧ ಪೊಲೀಸರಿಗೆ ದೂರು ಕೊಟ್ಟ ವಿಚಾರ ತಿಳಿಯಿತು ಎಂದರೆ ಸರಿಯಲ್ಲ.

6. ದಿಃ 06-08-2019 ರಂದು ಪೊಲೀಸರು ನನ್ನನ್ನು ವಿಚಾರಿಸಿದ್ದಾರೆ ಎಂದರೆ ಸರಿಯಲ್ಲ. ಆಗ ನಾನು ಅವರಿಗೆ ಮೇಲಿನ ವಿಚಾರಗಳನ್ನು ತಿಳಿಸಿ ಹೇಳಿಕೆ ನೀಡಿದ್ದೇನೆ ಎಂದರೆ ಸರಿಯಲ್ಲ. ಸಾಕ್ಷಿಯ ಸದರಿ ಹೇಳಿಕೆಯನ್ನು ನಿಪಿ.4 ಎಂದು ಗುರುತಿಸಲಾಯಿತು.

**7.** ಘಟನೆಯ ಬಗ್ಗೆ ಮಾಹಿತಿ ಇದ್ದು ಆ ಬಗ್ಗೆ ಪೊಲೀಸರಿಗೆ ನಿಪಿ.4 ರಂತೆ ಹೇಳಿಕೆಯನ್ನು ನೀಡಿದ್ದರೂ ಸಹ ಈಗ ಆರೋಪಿತರೊಂದಿಗೆ ಶಾಮೀಲಾಗಿ ಅವರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಿ ಎಂದರೆ ಸರಿಯಲ್ಲ.

ಪಾಟೀ ಸವಾಲು: ಆರೋಪಿತರ ಪರ ವಕೀಲರು ಸಾಕ್ಷಿಯ ಪಾಟೀ ಸವಾಲು ಇಲ್ಲವೆಂದು ನುಡಿದಿರುತ್ತಾರೆ.

(ನನ್ನ ಉಕ್ತಲೇಖನಕ್ಕೆ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

ಸಹಿ/-
(ಭಾನುಮತಿ ಬಿ.ಸಿ)
1 ನೇ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಚಿಕ್ಕಮಗಳೂರು.

ಸಾಕ್ಷಿಯ ಸಹಿ